



ಅರುಣ ಪಿ. ಭಟ್ಟ

# ವಾರ ಭವಿಷ್ಯ 7.10.2021ರಿಂದ 13.10.2021ರವರೆಗೆ


ಮೇಷ

ಈ ವಾರದ ಆರಂಭದಲ್ಲೇ ಸಂಬಂಧಿಕರ ಭೇಟಿಗೆ ನಿಶ್ಚಯ ಮಾಡುವ ಸಾಧ್ಯತೆ ಇದೆ. ಉದ್ಯೋಗಸ್ಥರಿಗೆ ತಾತ್ಕಾಲಿಕ ವರ್ಗಾವಣೆ ಸಾಧ್ಯತೆ ಇದೆ. ವಾರದ ಮಧ್ಯ ಭಾಗದಲ್ಲಿ ಕೌಟುಂಬಿಕ ಜೀವನ ಸಂತೋಷವಾಗಿರುತ್ತದೆ. ಸಂಗಾತಿ ಮಕ್ಕಳ ಜತೆಗಿನ ಬಾಂಧವ್ಯ ಉತ್ತಮವಾಗಿರುತ್ತದೆ. ವ್ಯಾಪಾರ ಮಾಡುತ್ತಿರುವವರಿಗೆ ಉತ್ತಮ ಪ್ರಗತಿ ಇದೆ. ಶುಭದಿನ 10. ಗಣಪತಿ ಸುಬ್ರಹ್ಮಣ್ಯ ಜಪ ಮಾಡಿರಿ.


ವೃಷಭ

ಈ ವಾರದ ಶುರುವಿನಲ್ಲೇ ಆದಾಯ ಹೆಚ್ಚಿಸಿಕೊಳ್ಳುವಲ್ಲಿ ಯಶಸ್ವಿಯಾಗುತ್ತೀರಿ. ಖರ್ಚನ್ನು ಕಡಿಮೆ ಮಾಡಿಕೊಳ್ಳುವಲ್ಲಿ ಯಶಸ್ವಿ ಆಗುತ್ತೀರಿ. ಉದ್ಯಮಿಗಳು, ಉದ್ಯೋಗಸ್ಥರು ಹಿಂದೆಂದಿಗಿಂತ ಹೆಚ್ಚು ಚಟುವಟಿಕೆಯಿಂದ ಕೆಲಸ ಮಾಡುತ್ತೀರಿ. ಪ್ರೀತಿಪಾತ್ರರಿಗೆ ಉಡುಗೊರೆಗಳನ್ನು ನೀಡುವ ಸಾಧ್ಯತೆ ಇದೆ. ವೈಯಕ್ತಿಕವಾಗಿ ಸಣ್ಣ ಪುಟ್ಟ ವಿಷಯಗಳಿಗೂ ಭಿನ್ನಾಭಿಪ್ರಾಯ ತಲೆದೋರಲಿದೆ. ಶುಭದಿನ 08. ಹನುಮಾನ್ ಚಾಲಿಸ್ ಪಠಿಸಿರಿ.


ಮಿಥುನ

ವ್ಯಾಪಾರಸ್ಥರಿಗೆ ಅತ್ಯುತ್ತಮ ಸಮಯ. ಆರೋಗ್ಯ ಕೂಡ ಈ ಅವಧಿಯಲ್ಲಿ ಉತ್ತಮವಾಗಿರುತ್ತದೆ. ಇದರಿಂದ ಸಂತೋಷ ಉಂಟಾಗುತ್ತದೆ. ನೀವು ಅಂದುಕೊಂಡ ಹಲವು ಕೆಲಸಗಳು ಪೂರ್ಣಗೊಳ್ಳುತ್ತವೆ. ಉದ್ಯೋಗಸ್ಥರಿಗೆ ಮಾಡುವ ಕೆಲಸದಲ್ಲಿ ಗುಣಮಟ್ಟದ ವೇಗ ಕಂಡುಕೊಳ್ಳಲು ಸಹಕಾರಿ ಆಗುತ್ತದೆ. ವಾರದ ಅಂತ್ಯಕ್ಕೆ ಆರೋಗ್ಯದಲ್ಲಿ ಏರಿಳಿತ ಕಾಣುತ್ತೀರಿ. ಶುಭದಿನ 09. ಗಣಪತಿಗೆ ದೂರ್ವಾರ್ಚನೆ ಮಾಡಿರಿ.


ಕಟಕ

ಶೈಕ್ಷಣಿಕ ವಲಯದಲ್ಲಿ ಇರುವವರು, ವಿದ್ಯಾರ್ಥಿಗಳಿಗೆ ಸಾಧನೆಗೆ ಅತ್ಯುತ್ತಮವಾದ ಅವಧಿ ಇದು. ಬಡ್ತಿ ಸಿಗುವ ಸಾಧ್ಯತೆಯೂ ಇದೆ. ಆರೋಗ್ಯ ಬಗ್ಗೆ ನಿರ್ಲಕ್ಷ್ಯ ಮಾಡದೇ ಚಿಕಿತ್ಸೆ ಪಡೆದುಕೊಳ್ಳಿ. ಸ್ವಯಂ ವೈದ್ಯ ಯಾವ ಕಾರಣಕ್ಕೂ ಬೇಡ. ಮುಂಬರುವ ದಿನಗಳಲ್ಲಿ ಹಲವು ಸಕಾರಾತ್ಮಕ ಅವಕಾಶಗಳು ನಿಮ್ಮನ್ನು ಹುಡುಕಿಕೊಂಡು ಬರಲಿವೆ. ಒಳ್ಳೆಯ ಮೊತ್ತ ದೊರೆಯಲಿದೆ. ಶುಭದಿನ 10. ಶಿವಕವಚ ಪಠಣ ಮಾಡಿರಿ.


ಸಿಂಹ

ವಾರದ ಶುರುವಿನಿಂದಲೇ ಕೆಲಸಗಳನ್ನು ಪೂರೈಸಲು ಬಹಳ ಶ್ರಮ ಹಾಕುತ್ತೀರಿ. ಹಣ ಹೂಡಿಕೆ ವ್ಯವಹಾರದಲ್ಲಿ ನಿಮ್ಮ ಸ್ಥಾನಮಾನಕ್ಕೆ ಧಕ್ಕೆ ಆಗುವ ಸಾಧ್ಯತೆ ಇದೆ. ಯಾರನ್ನೂ ಸುಮ್ಮನೆ ನಂಬುವುದು ಒಳ್ಳೆಯದಲ್ಲ. ವಂಚಕರ ಬಗ್ಗೆ ಎಚ್ಚರಿಕೆಯಿಂದ ಇರಬೇಕು. ಈ ಅವಧಿಯಲ್ಲಿ ನಿಮ್ಮ ಆರೋಗ್ಯ ಕೈಕೊಡುವ ಸಾಧ್ಯತೆ ಇದೆ. ಉನ್ನತ ಶಿಕ್ಷಣಕ್ಕೆ ಯತ್ನಿಸುತ್ತಿರುವವರು ಪ್ರಗತಿ ಕಾಣುತ್ತೀರಿ. ಶುಭದಿನ 11. ಲಿಂಗಾಷ್ಟಕ ಪಠಿಸಿರಿ.


ಕನ್ಯಾ

ವಾರದ ಆರಂಭದಿಂದಲೇ ವ್ಯಾಪಾರದಲ್ಲಿ ನಿಮಗೆ ಇರುವ ಕನಸನ್ನು ಈಡೇರಿಸಿಕೊಳ್ಳಲು ಶ್ರಮ ಹಾಕುತ್ತೀರಿ. ಇದರಿಂದ ಮುಂಬರುವ ದಿನಗಳಲ್ಲಿ ನಿಮಗೇ ಅನುಕೂಲ ಆಗಲಿದೆ. ಭೂಮಿ ಖರೀದಿ ವ್ಯವಹಾರಕ್ಕೆ ಸಂಬಂಧಿಸಿದಂತೆ ಹಲವು ಅವಕಾಶಗಳು ನಿಮಗೆ ದೊರೆಯುತ್ತವೆ. ನಿಮ್ಮ ವರ್ಚಸ್ಸು ಹಾಳು ಮಾಡಲು ವಿರೋಧಿ ಪಾಳಯದವರು ಬಹಳ ಪ್ರಯತ್ನ ಪಡುತ್ತಾರೆ. ಶುಭದಿನ 12. ಚಂಡಿ ಪಾರಾಯಣ ಮಾಡಿರಿ.


ತುಲಾ

ಕೌಟುಂಬಿಕ ವಿಚಾರದಲ್ಲಿ ವಾರದ ಶುರುವಿನಲ್ಲಿ ಸಮಸ್ಯೆಗಳನ್ನು ಎದುರಿಸಬೇಕಾಗುತ್ತದೆ. ಹಣಕಾಸಿಗೆ ಏನೂ ಕೊರತೆ ಇರುವುದಿಲ್ಲ. ಉದ್ಯೋಗ ಹಾಗೂ ಆರೋಗ್ಯದಲ್ಲಿ ಆಲಸ್ಯ ನಿಮ್ಮನ್ನು ಕಾಡಬಹುದು. ನಿಮ್ಮ ದೈನಂದಿನ ವ್ಯವಹಾರಗಳಲ್ಲಿ ಏರಿಳಿತಗಳಾಗುತ್ತವೆ. ವಾರದ ಮಧ್ಯದಲ್ಲಿ ಮನೆಗೆ ಸಂಬಂಧಿಸಿದ ವಿಷಯಗಳು ಪ್ರಾಮುಖ್ಯ ಪಡೆಯುತ್ತವೆ. ಶುಭದಿನ 09. ಸೌಂದರ್ಯ ಲಹರಿ ಪಠಿಸಿರಿ.


ವೃಶ್ಚಿಕ

ಶೈಕ್ಷಣಿಕ ರಂಗದಲ್ಲಿ ಕಾರ್ಯ ನಿರ್ವಹಿಸುವವರಿಗೆ ಯಶಸ್ಸು ದೊರೆಯುವ ಅವಕಾಶಗಳಿವೆ. ಹಲವು ಘಟನೆಗಳು ನೀವು ಅಂದುಕೊಂಡ ದಿಕ್ಕಿನ ಕಡೆಗೆ ಸಾಗುವುದರಿಂದ ಬಹಳ ಸಂತೋಷಗೊಳ್ಳುವಿರಿ. ಆದಾಯ ಮೂಲಗಳು ನೀವು ಅಂದುಕೊಂಡಿದ್ದಕ್ಕಿಂತ ಹೆಚ್ಚಿನ ಲಾಭವನ್ನು ತಂದುಕೊಡುವ ಸಾಧ್ಯತೆ ಇದೆ. ವ್ಯಾಪಾರಸ್ಥರ ಬೆಳವಣಿಗೆಗೆ ಅವಕಾಶ ದೊರೆಯುತ್ತದೆ. ಶುಭದಿನ 10. ವೆಂಕಟೇಶ್ವರ ಸ್ತೋತ್ರ ಪಠಿಸಿರಿ.


ಧನಸ್ಸು

ಜೀವನದಲ್ಲಿ ನಿಮ್ಮ ಜವಾಬ್ದಾರಿಗಳು ಹೆಚ್ಚಾಗಲಿವೆ. ಸಂತಾನ ನಿರೀಕ್ಷೆಯಲ್ಲಿ ಇರುವ ದಂಪತಿಗೆ ಶುಭ ಸುದ್ದಿ ಕೇಳುವ ಯೋಗ ಇದೆ. ಪೋಷಕರ ಅಗತ್ಯಗಳನ್ನು ಅರಿತು ಅವುಗಳನ್ನು ಪೂರೈಸಲು ಹೆಚ್ಚು ಪ್ರಯತ್ನ ಪಡುತ್ತೀರಿ. ವಾರದ ಮಧ್ಯ ಭಾಗದಲ್ಲಿ ನಿಮಗೆ ಅನುಕೂಲಕರವಾದ ಕೆಲ ಬೆಳವಣಿಗೆಗಳು ಆಗಲಿವೆ. ಧಾರ್ಮಿಕ ಕ್ಷೇತ್ರಗಳಿಗೆ ಭೇಟಿ ನೀಡುವ ಸಾಧ್ಯತೆಗಳಿವೆ. ಶುಭದಿನ 11. ಕಾಲಭೈರವನ ಸೇವೆ ಮಾಡಿರಿ.


ಮಕರ

ನಿಮ್ಮ ಶ್ರಮಕ್ಕೆ ಉತ್ತಮ ಪ್ರತಿಫಲ ದೊರೆಯುತ್ತದೆ. ಮನೆ ಹಾಗೂ ಕುಟುಂಬದಲ್ಲಿ ಸಕಾರಾತ್ಮಕವಾದ ವಾತಾವರಣ ಸೃಷ್ಟಿಸುವಲ್ಲಿ ಯಶಸ್ವಿಯಾಗುತ್ತೀರಿ. ನಿಮ್ಮ ಶ್ರಮದ ಮೂಲಕವೇ ಆದಾಯ ಹೆಚ್ಚಳಕ್ಕೆ ಅವಕಾಶ ದೊರೆಯುತ್ತದೆ. ಉದ್ಯೋಗಸ್ಥರಿಗೆ ವಾರದ ಮಧ್ಯ ಭಾಗದಲ್ಲಿ ಬಡ್ತಿ ದೊರೆಯುವ ಅವಕಾಶಗಳಿವೆ. ನಿಮ್ಮ ಕೌಶಲವನ್ನು ಹೆಚ್ಚಿಸಿಕೊಳ್ಳಲು ಶ್ರಮ ಹಾಕಿ. ಶುಭದಿನ 08.ವಿಷ್ಣು ಸಹಸ್ರನಾಮ ಮಾಡಿ.


ಕುಂಭ

ವಾರದ ಶುರುವಿನಲ್ಲಿ ಕೌಟುಂಬಿಕ ವಿಚಾರಗಳಿಗಾಗಿ ದೂರ ಪ್ರಯಾಣ ಮಾಡಬೇಕಾಗುತ್ತದೆ. ಕೆಲಸ ಮಾಡುವ ನಿಮ್ಮ ಸಾಮರ್ಥ್ಯ ನಿರಂತರವಾಗಿ ಹೆಚ್ಚಾಗುತ್ತಾ ಸಾಗುತ್ತದೆ. ಈ ಅವಧಿಯಲ್ಲಿ ನಿಮ್ಮ ಆರೋಗ್ಯ ಅಷ್ಟೇನೂ ಉತ್ತಮವಾಗಿ ಇರುವುದಿಲ್ಲ. ಇದು ನಿಮ್ಮ ಚಿಂತೆಗೆ ಕಾರಣವಾಗಲಿದೆ. ಈ ಮಧ್ಯೆ ಕುಟುಂಬದವರ ಜತೆಗೆ ಉತ್ತಮ ಬಾಂಧವ್ಯ ಏರ್ಪಡುತ್ತದೆ. ಶುಭದಿನ 09. ಗಣೇಶಪಂಚರತ್ನ ಸ್ತೋತ್ರ ಪಠಿಸಿರಿ.


ಮೀನ

ನೀವು ಕಾರ್ಯ ನಿರ್ವಹಿಸುವ ಸಂಸ್ಥೆಯ ದೀರ್ಘಾವಧಿ ಜವಾಬ್ದಾರಿಯೊಂದನ್ನು ನೀವೇ ಪೂರ್ಣಗೊಳಿಸಲು ಒಪ್ಪಿಕೊಳ್ಳುತ್ತೀರಿ. ವೈವಾಹಿಕ ಜೀವನ ಸಂತುಷ್ಟವಾಗಿರುತ್ತದೆ. ಆರೋಗ್ಯ ಕೂಡ ಉತ್ತಮವಾಗಿರುತ್ತದೆ. ವಾರದ ಮಧ್ಯ ಭಾಗದಲ್ಲಿ ಕೌಟುಂಬಿಕ ವಿಚಾರವಾಗಿಯೇ ಪ್ರಯಾಣ ಮಾಡಬೇಕಾಗುತ್ತದೆ. ಅದಕ್ಕಾಗಿ ಅನಿವಾರ್ಯವಾಗಿ ಚಿಕಿತ್ಸೆ ಪಡೆಯಬೇಕಾಗುತ್ತದೆ. ಶುಭದಿನ 07. ಲಕ್ಷ್ಮೀ ನರಸಿಂಹ ಸ್ತೋತ್ರ ಪಠಿಸಿರಿ.